ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಅನುದಾನ ರಹಿತ ಕಾನೂನು ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) -

114 (1007) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಅನುದಾನ ರಹಿತ ಕಾನೂನು ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಇರುವ ನಿಯಮಾವಳಿಗಳೇನು ; (ಸಂಪೂರ್ಣ ವಿವರವನ್ನು ಒದಗಿಸುವುದು)

(ಆ) 1985ರ ನಂತರ ಆರಂಭವಾದ ಅನುದಾನ ರಹಿತ ಕಾನೂನು ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) 1985ರ ನಂತರ ಆರಂಭವಾದ ಕಾನೂನು ಕಾಲೇಜುಗಳ ಸಂಖ್ಯೆ ಎಷ್ಟು ; ಈ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ಸರ್ಕಾರಕ್ಕೆ ತಗಲಬಹುದಾದ ಆರ್ಥಿಕ ವೆಚ್ಚ ಎಷ್ಟು ;

(ಈ) ಅನುದಾನಕ್ಕೆ ಒಳಪಡಿಸಲು ಸರ್ಕಾರ ಇಚ್ಛಿಸಿದ್ದಲ್ಲಿ, ಯಾವ ವರ್ಷದಿಂದ ಯಾವ ವರ್ಷದವರೆಗೆ ಆರಂಭವಾದ ಕಾನೂನು ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಚಿಂತಿಸಲಾಗಿದೆ ?